**ಕರ್ನಾಟಕ ಸರ್ಕಾರ**

ಸಂ: ಗ್ರಾಅಪ 76 ಸ್ವೀಮರ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:24.07.2018.

**ಸುತ್ತೋಲೆ**

**ವಿಷಯ:** ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಅಧೀನ ಇಲಾಖೆ ಮತ್ತು ಜಿಲ್ಲಾ ಪಂಚಾಯತ್‌ಗಳಲ್ಲಿ ನಡೆಯುವ ಸಭೆ ಸಮಾರಂಭ ಗಳಲ್ಲಿ ಕುಡಿಯುವ ನೀರನ್ನು ಪ್ಲಾಸ್ಟಿಕ್ ಬಾಟಲುಗಳಲ್ಲಿ ಒದಗಿಸದೆ ಪರ್ಯಾಯ ಮಾರ್ಗದಲ್ಲಿ ಒದಗಿಸುವ ಬಗ್ಗೆ.

****

ಹೆಚ್ಚಿನ ಪ್ಲಾಸ್ಟಿಕ್ ತ್ಯಾಜ್ಯದಿಂದಾಗಿ ಹಲವಾರು ಗಂಭೀರ ಸಮಸ್ಯೆಗಳು ಉದ್ಭವವಾಗುತ್ತಿದ್ದು, ಇದರಿಂದ ಮಾನವನ, ಪಶು, ಪಕ್ಷಿ ಮತ್ತು ಪ್ರಾಣಿಗಳ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುವುದರ ಜೊತೆಗೆ ನೈಸರ್ಗಿಕ ಸ್ವಚ್ಛತೆಯನ್ನು ಕಾಪಾಡುವುದು ಬಹಳಷ್ಟು ದುಸ್ತರವಾಗಿರುತ್ತದೆ. ಹಾಗಾಗಿ ಪ್ಲಾಸ್ಟಿಕ್ ತ್ಯಾಜ್ಯ ನಿಯಂತ್ರಿಸುವುದು ಇಂದಿನ ಅತ್ಯಂತ ಅವಶ್ಯವಾಗಿರುತ್ತದೆ.

ಈ ದಿಸೆಯಲ್ಲಿ ಪ್ರಾಥಮಿಕ ಹಂತದಲ್ಲಿ ಕೆಲವೊಂದು ಪ್ಲಾಸ್ಟಿಕ್ ಬಳಕೆಯ ನಿರ್ಭಂದದ ಕ್ರಮಗಳನ್ನು ಸರ್ಕಾರ / ಇಲಾಖೆಯ ಹಂತದಲ್ಲಿ ಕೈಗೊಳ್ಳಬೇಕಾಗಿರುತ್ತದೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವತಿಯಿಂದ, ಇಲಾಖಾ ಮುಖ್ಯಸ್ಥರ ಹಂತದಲ್ಲಿ ಹಾಗೂ ಜಿಲ್ಲಾ ಪಂಚಾಯತಿಗಳ ಹಂತದಲ್ಲಿ ಏರ್ಪಡಿಸಲಾಗುತ್ತಿರುವ ವಿವಿಧ ಸಭೆ ಸಮಾರಂಭಗಳಲ್ಲಿ ಕುಡಿಯುವ ನೀರನ್ನು ಪ್ಲಾಸ್ಟಿಕ್ ಬಾಟಲ್‌ಗಳಲ್ಲಿ ಒದಗಿಸುವ ಬದಲು 20 ಲೀಟರ್‌ಗಳ ಕ್ಯಾನ್‌ಗಳನ್ನು ಖರೀದಿಸಿ ಕಪ್ ಮೂಲಕ ಕುಡಿಯುವ ನೀರನ್ನು ಒದಗಿಸಲು ಕ್ರಮ ಕೈಗೊಳ್ಳುವಂತೆ ಈ ಮೂಲಕ ಸೂಚಿಸಲಾಗಿದೆ. ಸದರಿ ಸೂಚನೆಯನ್ನು ಇಲಾಖೆಯ ಎಲ್ಲಾ ಹಿರಿಯ ಅಧಿಕಾರಿಗಳು ತಮ್ಮ ಹಂತದಲ್ಲಿ ಅನುಷ್ಠಾನಗೊಳಿಸಲು ಕ್ರಮ ಕೈಗೊಂಡು ಮಾದರಿಯಾಗಬೇಕೆಂದು ಸಹ ತಿಳಿಸಿದೆ.

(ಎಲ್.ಕೆ.ಅತೀಕ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಇವರಿಗೆ:**

1. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
2. ಆಯುಕ್ತರು, ಗ್ರಾಮೀಣಾಭಿವೃದ್ಧಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಯಮಿತ, ಬೆಂಗಳೂರು
4. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು
6. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ,
7. ಮುಖ್ಯ ಕಾರ್ಯಚರಣೆ ಅಧಿಕಾರಿ, ಕೆ.ಆರ್.ಆರ್.ಡಿ.ಎ. ಬೆಂಗಳೂರು

8. ಇಲಾಖೆಯ ಎಲ್ಲಾ ನಿರ್ದೇಶಕರು,
9. ಸರ್ಕಾರದ ಉಪ ಕಾರ್ಯದರ್ಶಿ (ಆಡಳಿತ 1 & 2), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
10. ಪ್ರಕಟಣ ಫಲಕ / ಗಣಕಕೋಶ ಶಾಖೆ
11. ಹೆಚ್ಚುವರಿ ಪ್ರತಿ

<u>ಪ್ರತಿ:</u>

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ವಿಶೇಷಾಧಿಕಾರಿಗಳು, ವಿಕಾಸಸೌಧ, ಬೆಂಗಳೂರು
2. ಸರ್ಕಾರದ ಮುಖ್ಯ ಕಾರ್ಯದರ್ಶಿ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು